ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/221/ಕಂಸಾಪನಿ/2015-16/ಸೇವಿ-2

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ: 19/12/2022

## ಸುತ್ತೋಲೆ

ವಿಷಯ: ದಿನಾಂಕ:31.12.2022 ರೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆಯ ಸಂಖ್ಯೆ:ಡಿಪಿಆರ್/43/ಎಸಿಆರ್/2008, ದಿನಾಂಕ:07.03.2012.
2. ಸರ್ಕಾರದ ಅದಿಸೂಚನೆಯ ಸಂಖ್ಯೆ:ಡಿಪಿಆರ್/154/ ಎಸಿಆರ್/2014, ದಿನಾಂಕ:27.04.2015.
3. ಈ ಕಛೇರಿಯ ಸಮ ಸಂಖ್ಯೆಯ ಸುತ್ತೋಲೆಯ ದಿ:26.03.2016.
4. ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ/53/ಸೇವನೆ/2021, ದಿನಾಂಕ:19.08.2021.
5. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ/13/ಸೇವನೆ/2022 ದಿನಾಂಕ:05.05.2022
6. ಈ ಕಛೇರಿಯ ಸಮ ಸಂಖ್ಯೆಯ ಸುತ್ತೋಲೆ ದಿ:13.06.2022

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಅಧಿಸೂಚನೆ ಮತ್ತು ಈ ಕಛೇರಿಯ ಸುತ್ತೋಲೆಗಳ ಉಲ್ಲೇಖಗಳಲ್ಲಿ ಕರ್ನಾಟಕ ಸಿವಿಲ್ ಸೇವಾ ಕಂಪ್ಯೂಟರ್ ಸಾಕ್ಷರತಾ (ಪರೀಕ್ಷೆ) ನಿಯಮಗಳು 2012 ರಲ್ಲಿ ಸೂಚಿಸಿರುವಂತೆ ಯಾವುದೇ ಸರ್ಕಾರಿ ನೌಕರರು ಸೇವೆಗೆ ಸೇರಿದ ದಿನಾಂಕದಿಂದ 02 ವರ್ಷಗಳ ಪರೀಕ್ಷಾರ್ಥ ಸೇವಾವಧಿಯೊಳಗಾಗಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೇಯಲ್ಲಿ ಉತ್ತೀರ್ಣರಾಗಿರುವ ಪ್ರಮಾಣ ಪತ್ರ ಸಲ್ಲಿಸುವಂತೆ ಅಥವಾ ನಿಗದಿತ ಅವಧಿಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಪೂರೈಸಬೇಕೆಂದು ಸೂಚಿಸಲಾಗಿತ್ತು.

ಪ್ರಸ್ತುತ ಉಲ್ಲೇಖ (5) ರ ಸರ್ಕಾರದ ಅಧಿಸೂಚನೆಯನ್ವಯ ಸರ್ಕಾರಿ ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು **ದಿನಾಂಕ:31.12.2022** ರೊಳಗೆ ತೆಗೆದುಕೊಂಡು ಉತ್ತೀರ್ಣರಾಗಬೇಕಾಗಿರುತ್ತದೆ. ಸದರಿ ದಿನಾಂಕದೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ನೌಕರರು ಪರಿವೀಕ್ಷಣಾ ಅವಧಿ, ಮುಂಬಡ್ತಿ ಹಾಗೂ ವಾರ್ಷಿಕ ವೇತನ ಬಡ್ತಿ ಇತ್ಯಾದಿಗಳನ್ನು ಪಡೆಯಲು ಅನರ್ಹರಾಗುತ್ತಾರೆ. ಆದುದರಿಂದ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ನಿಗದಿತ ಅವಧಿಯೊಳಗೆ ಉತ್ತೀರ್ಣರಾಗುವ ಷರತ್ತಿಗೊಳಪಟ್ಟು ಪರೀಕ್ಷಾರ್ಥ ಸೇವಾವಧಿ ಘೋಷಣೆ ಮಾಡಲಾಗಿದ್ದು, ಅಂತಹ

D:\Service-2-New\CR\PP Decl\Suttole.docx

ಪು.ತಿ.ನೋ

ಬೋಧಕ/ಬೋಧಕೇತರರು ಉತ್ತೀರ್ಣರಾಗಿರುವ ಪ್ರಮಾಣ ಪತ್ರಗಳನ್ನು ಪ್ರಾಂಶುಪಾಲರ/ಜಂಟಿ ನಿರ್ದೇಶಕರುಗಳ ದೃಢೀಕರಣದೊಂದಿಗೆ ಕೂಡಲೇ ಕಳುಹಿಸಿಕೊಡುವಂತೆ ತಿಳಿಸಲಾಗಿದೆ.

ತಮ್ಮ ವಿಶ್ವಾಸಿ

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

<u>ಇವರಿಗೆ:</u>

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, (ಬೆಂಗಳೂರು, ಮೈಸೂರು, ಶಿವಮೊಗ್ಗ, ಧಾರವಾಡ, ಮಂಗಳೂರು, ಕಲಬುರ್ಗಿ) – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
4. ಕಛೇರಿ ಪ್ರತಿ.